ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ನ್ಯಾಯಬೆಲೆ ಅಂಗಡಿಗಳ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

497 (502) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನ್ಯಾಯಾಬೆಲೆ ಅಂಗಡಿಗಳನ್ನು ತೆರೆಯಲು ಇರುವ ಮಾನದಂಡಗಳೇನು; ಹಾಸನ ಜಿಲ್ಲೆಯಲ್ಲಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು; ಮತ್ತು ಈ ಅಂಗಡಿಗಳು ಯಾವ ಹೆಸರಿನಲ್ಲಿ ಪ್ರಾರಂಭವಾಗಿವೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನ್ಯಾಯಬೆಲೆ ಅಂಗಡಿಯನ್ನು ಹೊಂದಿರುವವರು ಮರಣ ಹೊಂದಿದಲ್ಲಿ ಅವರು ನಡೆಸುತ್ತಿರುವ ಅಂಗಡಿಯನ್ನು ಅವರ ವಾರಸ್ಸುದಾರರಿಗೆ ನೀಡಲು ಅವಕಾಶವಿದೆಯೇ; (ಮಾಹಿತಿ ನೀಡುವುದು)

(ಇ) ನ್ಯಾಯಾಬೆಲೆ ಅಂಗಡಿಯ ಮಾಲೀಕರು ಸರ್ಕಾರ ನಿಗಧಿಪಡಿಸಿರುವ ಪ್ರಮಾಣದ ದಿನಸಿ ಸಾಮಗ್ರಿಗಳನ್ನು ಎಪಿಎಲ್ ಮತ್ತು ಬಿಪಿಎಲ್ ಕಾರ್ಡ್‌ದಾರರಿಗೆ ವಿತರಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರವು ಯಾವ ಮಾನದಂಡಗಳನ್ನು ಅನುಸರಿಸುತ್ತಿದೆ; (ಮಾಹಿತಿ ನೀಡುವುದು)

(ಈ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯ ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ಕಾರ ನಿಗಧಿಪಡಿಸಿರುವ ಪ್ರಮಾಣದ ದಿನಸಿ ಸಾಮಾಗ್ರಿಗಳನ್ನು ನೀಡದೆ ಅವ್ಯವಹಾರದಲ್ಲಿ ತೊಡಗಿರುವ ಪ್ರಕರಣಗಳು ಕಂಡು ಬಂದಿದೆಯೇ; ಕಂಡುಬಂದಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಅಂಗಡಿ ಮಾಲೀಕರ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? (ಪ್ರಕರಣವಾರು ಮಾಹಿತಿ ನೀಡುವುದು)